15	Tumkur	2511	20525150
16	Chitradurga	1492	14365800
17	Davanagere	2262	17778800
18	Shimoga	835	7233500
19	Mysore	1367	14403500
20	Chamrajnagar	769	7078600
21	Mandya	3789	28943100
22	Hassan	2049	17081000
23	Chikmaglur	887	8498400
24	Kodagu	286	3620600
25	DK	585	6391300
26	Udupi	894	9949700
Total		**32087**	**285686050**

641 ಶ್ರೀ ಸುಭಾಷ ಆರ್. ಗುತ್ತೇದಾರ್ (ಅಳಂದ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆ ಅಳಂದ ತಾಲ್ಲೂಕಿನ ದೇವಂತಗಿ ಸೇತುವೆಯು ಪ್ರವಾಹದಲ್ಲಿ ಸಂಪೂರ್ಣ ಕೊಚ್ಚಿ ಹೋಗಿರುವುದರಿಂದ, ಆ ಭಾಗದ ಗ್ರಾಮಗಳಿಗೆ ರಸ್ತೆ ಸಂಪರ್ಕ ಕಡಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಸೇತುವೆಯನ್ನು ದುರಸ್ತಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಕೆ.ಆರ್.ಡಿ.ಸಿ.ಎಲ್. ಯೋಜನೆ ಯಡಿಯಲ್ಲಿ ಈ ಸೇತುವೆಯ ಟೆಂಡರ್ ಪ್ರಕ್ರಿಯೆಯ ಕಾಮಗಾರಿಯು ಯಾವ ಹಂತದಲ್ಲಿದೆ;

ಈ) ಈ ಸೇತುವೆ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ;

ಉ) ಹಾಗಿದ್ದಲ್ಲಿ, ಯಾವಾಗ ಕಾಮಗಾರಿಯನ್ನು ಪೂರ್ಣಗೊಳಿಸ ಲಾಗುವುದು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಮತ್ತು ಇ) ಸದರಿ ಸೇತುವೆಯನ್ನು ಸರ್ಕಾರವು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಎರಡನೇ ಹಂತದ ಸೇತುವೆ ನಿರ್ಮಾಣ ಕಾರ್ಯಕ್ರಮದಡಿಯಲ್ಲಿ ತೆಗೆದುಕೊಳ್ಳಲು ಅನುಮೋದಿಸಿತ್ತು. ಇದರ ಪ್ರಕಾರ, ಈ ಕಾಮಗಾರಿಯನ್ನು ಮೆ:ಗ್ಯಾಮನ್ ಇಂಡಿಯಾ ಲಿ. ಇವರಿಗೆ ವಹಿಸಲಾಗಿತ್ತು. ಗುತ್ತಿಗೆದಾರರು ಕಾಮಗಾರಿಯನ್ನು ಪ್ರಾರಂಭಿಸಲು ಸ್ಥಳಕ್ಕೆ ಹೋದಾಗ ಸ್ಥಳೀಯರು ಕಾಮಗಾರಿಯನ್ನು ತೆಗೆದುಕೊಳ್ಳಲು ಅಡ್ಡಪಡಿಸಿದ್ದರಿಂದ ಸ್ಥಳವನ್ನು ಬಿಡಿಸಿಕೊಡಲು ತಹಶೀಲ್ದಾರರು ಮತ್ತು ಕಾರ್ಯಪಾಲಕ ಇಂಜಿನಿಯರ್‌ರವರನ್ನು ಕೋರಲಾಗಿತ್ತು. ಆದರೆ ಸ್ಥಳವು ಲಭ್ಯವಾಗದ ಕಾರಣ ಮತ್ತು ಗುತ್ತಿಗೆ ಅವಧಿಯು ಕೂಡ ಮುಗಿದಿದ್ದರಿಂದ, ಸದರಿ ಸೇತುವೆಯ ನಿರ್ಮಾಣ ಕಾರ್ಯವನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಕೈಬಿಡಲಾಗಿದೆ ಮತ್ತು ಸದರಿ ಸೇತುವೆಯನ್ನು ಲೋಕೋಪಯೋಗಿ ಇಲಾಖೆ ವತಿಯಿಂದ ತೆಗೆದುಕೊಳ್ಳಲು ಪರಿಶೀಲಿಸಲಾಗುತ್ತಿದೆ.

ಈ) ಮೇಲಿನ ಉತ್ತರದನ್ವಯ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಮೇಲಿನ ಉತ್ತರದನ್ವಯ ಪ್ರಶ್ನೆ ಉದ್ಭವಿಸುವುದಿಲ್ಲ.

485 ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಅರಣ್ಯ ಇಲಾಖೆಯಲ್ಲಿ ನೌಕರರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಯಾವ ಯಾವ ಹುದ್ದೆಗಳ ಅವಶ್ಯಕತೆ ಇದೆ ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು;

ಇ) ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು);

ಈ) ನೌಕರರ ಕೊರತೆಯಿಂದಾಗಿ ಅರಣ್ಯ ಸಂಪತ್ತು ಲೂಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?